ದಿಃ 21.08.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಎನ್.ಎಸ್.ಜೆ., ವಕೀಲರಿಂದ ವಾದಿ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

2. ನೋಟರಿ ರವರ ಮುಂದೆ ಪ್ರಮಾಣಿಕರಿಸಿದ ಕುಟುಂಬದ ವಂಶವೃಕ್ಷವನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.1 ಎಂದು, ಮಾಹಿತಿ ಹಕ್ಕು ಅಧಿನಿಯಮದ ಅಡಿ ಸಲ್ಲಿಸಿದ ಅರ್ಜಿಯ ಮೇರೆಗೆ ಹಳೇ ಮೂಡಿಗೆರೆ ಗ್ರಾಮ ಪಂಚಾಯಿತಿಯ ಪಿ.ಡಿ.ಒ ರವರು ನೀಡಿರುವ ಮಾಹಿತಿಯ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ.2 ಎಂದು, ಪಿ.ಡಿ.ಒ ರವರು ಮಾಹಿತಿ ಅಧಿನಿಯಮದ ಅಡಿ ಸಲ್ಲಿಸಿದ ಅರ್ಜಿಯ ಮೇರೆಗೆ ಎ. ಮೊಹಿದ್ದಿನ್ ಬಿನ್ ಅಬ್ದುಲ್ಲಾ ರವರ ಹೆಸರಿನಲ್ಲಿ ಇರುವ ಆಸ್ತಿಗೆ ಸಂಬಂಧಿಸಿದ 2008-09 ನೇ ಸಾಲಿನ assessment extract, ವಂಶ ವೃಕ್ಷದ ಪ್ರಮಾಣ ಪತ್ರ, ಹಕ್ಕು ಪತ್ರ, ಪ್ರತಿವಾದಿಯ ಹೆಸರಿನಲ್ಲಿ ಇರುವ ಇ.ಖಾತಾ ಎಕ್ಸ್ಟ್ರಾಕ್ಟ್, ವಿದ್ಯುತ್ ಪಾವತಿ ರಸೀದಿ, ಮೂಡಿಗೆರೆಯ ಪೊಲೀಸ್ ವೃತ್ತ ನಿರೀಕ್ಷಕರು ನೀಡಿರುವ ವರದಿಯನ್ನು ಹಾಜರು ಮಾಡಿದ್ದು ಅವುಗಳನ್ನು ನಿ.ಪಿ.3 ರಿಂದ 8 ಎಂದು ಗುರುತಿಸಲಾಯಿತು. ಪ್ರತಿವಾದಿಗೆ ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.9 ಎಂದು, ಅಂಚೆ ರಸೀದಿಯನ್ನು ಹಾಜರು ಮಾಡಿದ್ದು ನಿ.ಪಿ.10 ಎಂದು, ಪ್ರತಿವಾದಿಗೆ ನೋಟೀಸು ಜಾರಿಯಾದ ಬಗ್ಗೆ ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ.11 ಎಂದು, ಪ್ರತಿವಾದಿ ತನ್ನ ವಕೀಲರ ಮೂಲಕ ನೀಡಿದ

ಪ್ರತ್ಯುತ್ತರವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ.12 ಎಂದು ಗುರುತಿಸಲಾಯಿತು.

3. ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲು ಶ್ರೀ ಕೆ.ಎಸ್.ಎ ವಕೀಲರಿಂದ ಪ್ರತಿವಾದಿ ಪರವಾಗಿ

4. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು .

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ